**All India Radio: Bangalore**
**National Bulletin In Kannada**
**09.03.2026 07.35 a.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**09.03.2026 07.35 a.m.**

**<><><><>**

ಮುಖ್ಯಾಂಶಗಳು

1. ಸಂಸತ್ತಿನ ಬಜೆಟ್ ಅಧಿವೇಶನದ ಎರಡನೇ ಹಂತ ಇಂದಿನಿಂದ ಆರಂಭ: ಲೋಕಸಭಾಧ್ಯಕ್ಷರ ಪದಚ್ಯುತಿ ನಿರ್ಣಯ ಮಂಡನೆ ಸಾಧ್ಯತೆ
2. ಸಬ್ ಕಾ ಸಾಥ್ ಸಬ್ ಕಾ ವಿಕಾಸ್ ವೆಬಿನಾರ್ ಉದ್ದೇಶಿಸಿ ಇಂದು ಪ್ರಧಾನಿ ನರೇಂದ್ರ ಮೋದಿ ಭಾಷಣ
3. ವಿಕಸಿತ ಭಾರತ ಯುವ ಸಂಪರ್ಕ ಕಾರ್ಯಕ್ರಮದ ಎರಡನೇ ಹಂತಕ್ಕೆ ಇಂದು ಚಾಲನೆ
4. ಇರಾನ್‌ನ ನೂತನ ಸರ್ವೋಚ್ಚ ನಾಯಕರಾಗಿ ಮೊಜ್ತಬಾ ಖಮೇನಿ ನೇಮಕ
5. ಸತತ ೨ನೇ ಬಾರಿ ಟಿ-೨೦ ವಿಶ್ವ ಚಾಂಪಿಯನ್ ಪಟ್ಟ ಅಲಂಕರಿಸಿದ ಭಾರತ ; ಫೈನಲ್‌ನಲ್ಲಿ ನ್ಯೂಜಿಲೆಂಡ್ ವಿರುದ್ಧ ೯೬ ರನ್‌ಗಳ ಜಯ
6. ಟಿ-೨೦ ವಿಶ್ವಕಪ್ ವಿಜೇತ ಭಾರತ ತಂಡಕ್ಕೆ ರಾಷ್ಟ್ರಪತಿ, ಉಪರಾಷ್ಟ್ರಪತಿ, ಪ್ರಧಾನಿ ಸೇರಿದಂತೆ ಗಣ್ಯರಿಂದ ಅಭಿನಂದನೆ

<><><><>

ಸಂಸತ್ತಿನ ಬಜೆಟ್ ಅಧಿವೇಶನದ ಎರಡನೇ ಹಂತ ಇಂದು ಆರಂಭವಾಗಲಿದ್ದು, ಏಪ್ರಿಲ್ ೨ರವರೆಗೆ ಮುಂದುವರಿಯಲಿದೆ. ಇಂದಿನ ಕಲಾಪದಲ್ಲಿ ಲೋಕಸಭಾಧ್ಯಕ್ಷ ಓಂ ಬಿರ್ಲಾ ಅವರ ಪದಚ್ಯುತಿಗೆ ಕೋರಿ ನಿರ್ಣಯವು ಪ್ರಮುಖವಾಗಿ ಚರ್ಚೆಗೆ ಬರುವ ಸಾಧ್ಯತೆಯಿದೆ. ಕಾಂಗ್ರೆಸ್ ಸದಸ್ಯರಾದ ಮೊಹಮ್ಮದ್ ಜಾವೇದ್, ಕೆ. ಸುರೇಶ್ ಮತ್ತು ಮಲ್ಲು ರವಿ ಈ ನೋಟಿಸ್ ನೀಡಿದ್ದಾರೆ. ಒಂದು ವೇಳೆ ಈ ನಿರ್ಣಯವನ್ನು ಸದನವು ಅಂಗೀಕರಿಸಿದರೆ, ನಿಯಮದಂತೆ ಓಂ ಬಿರ್ಲಾ ಅವರು ಸಭಾಧ್ಯಕ್ಷರ ಪೀಠ ಅಲಂಕರಿಸುವಂತಿಲ್ಲ; ಬದಲಾಗಿ ಅವರು ಸಾಮಾನ್ಯ ಸದಸ್ಯರ ಸಾಲಿನಲ್ಲಿ ಕುಳಿತುಕೊಳ್ಳಬೇಕಾಗುತ್ತದೆ. ಇದೇ ವೇಳೆ, ವಿದೇಶಾಂಗ ವ್ಯವಹಾರಗಳ ಸಚಿವ ಡಾ. ಎಸ್. ಜೈಶಂಕರ್, ಪಶ್ಚಿಮ ಏಷ್ಯಾದ ಪ್ರಸ್ತುತ ಪರಿಸ್ಥಿತಿಯ ಕುರಿತು ಲೋಕಸಭೆಯಲ್ಲಿ ಹೇಳಿಕೆ

ನೀಡಲಿದ್ದಾರೆ. ರಾಜ್ಯಸಭೆಯಲ್ಲಿ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವಾಲಯದ ಕಾರ್ಯವೈಖರಿಯ ಕುರಿತು ಚರ್ಚೆ ನಡೆಯಲಿದೆ.

<><><><>

ಸಬ್ ಕಾ ಸಾಥ್ ಸಬ್ ಕಾ ವಿಕಾಸ್ - ಜನರ ಆಕಾಂಕ್ಷೆಗಳನ್ನು ಪೂರೈಸುವುದು ಎಂಬ ವಿಷಯದ ಕುರಿತು ಆಯೋಜಿಸಲಾಗಿರುವ ಬಜೆಟ್ ನಂತರದ ವೆಬಿನಾರ್ ಅನ್ನು ಉದ್ದೇಶಿಸಿ ಪ್ರಧಾನಿ ನರೇಂದ್ರ ಮೋದಿ ಅವರು ಇಂದು ಮಾತನಾಡಲಿದ್ದಾರೆ. ಶಿಕ್ಷಣ, ಕೌಶಲ್ಯಾಭಿವೃದ್ಧಿ, ಆರೋಗ್ಯ, ಆಯುಷ್, ಪ್ರವಾಸೋದ್ಯಮ ಮತ್ತು ಆತಿಥ್ಯ ಕ್ಷೇತ್ರಗಳಲ್ಲಿನ ಬಜೆಟ್ ಘೋಷಣೆಗಳ ಜಾರಿಯ ಕುರಿತು ಈ ವೆಬಿನಾರ್‌ನಲ್ಲಿ ಚರ್ಚೆಗಳು ನಡೆಯಲಿವೆ. ವಿಶೇಷವಾಗಿ ಶಿಕ್ಷಣದಿಂದ ಉದ್ಯೋಗದವರೆಗಿನ ಮಾರ್ಗಗಳನ್ನು ಬಲಪಡಿಸುವುದು, ಅನಿಮೇಷನ್, ವಿಶ್ಯುಯಲ್ ಎಫೆಕ್ಟ್ಸ್, ಗೇಮಿಂಗ್ ಮತ್ತು ಕಾಮಿಕ್ಸ್ ಅಭಿವೃದ್ಧಿ, ಈಶಾನ್ಯ ರಾಜ್ಯಗಳಲ್ಲಿ ಬೌದ್ಧ ಸರ್ಕ್ಯೂಟ್‌ಗಳ ವಿಸ್ತರಣೆ ಮತ್ತು ಪಾರಂಪರಿಕ ಪ್ರವಾಸೋದ್ಯಮದ ಪ್ರಚಾರದ ಕುರಿತು ಇಲ್ಲಿ ಗಂಭೀರ ಸಮಾಲೋಚನೆ ನಡೆಯಲಿದೆ.

<><><><>

ಕೇಂದ್ರ ಯುವ ವ್ಯವಹಾರಗಳು ಮತ್ತು ಕ್ರೀಡಾ ಸಚಿವಾಲಯ ಇಂದು ದೆಹಲಿಯಲ್ಲಿ ವಿಕಸಿತ ಭಾರತ ಯುವ ಸಂಪರ್ಕ ಕಾರ್ಯಕ್ರಮದ ಎರಡನೇ ಹಂತವನ್ನು ಪ್ರಾರಂಭಿಸಲಿದೆ. ವಿಕಸಿತ ಭಾರತ ೨೦೪೭ ರ ದೃಷ್ಟಿಕೋನದೊಂದಿಗೆ ಯುವಜನರ ತೊಡಗಿಸಿಕೊಳ್ಳುವಿಕೆಯನ್ನು ಬಲಪಡಿಸಲು ಮೇರಾ ಯುವ ಭಾರತ್, ಮೈ ಭಾರತ್ ಮೂಲಕ ಈ ಉಪಕ್ರಮವನ್ನು ಆಯೋಜಿಸಲಾಗುತ್ತಿದೆ. ರಾಷ್ಟ್ರ ರಾಜಧಾನಿಯಾದ್ಯಂತ ೩೫ ಕ್ಕೂ ಹೆಚ್ಚು ಕಾಲೇಜುಗಳಿಂದ ೧೦ ಸಾವಿರಕ್ಕೂ ಹೆಚ್ಚು ವಿದ್ಯಾರ್ಥಿಗಳು ಈ ಕಾರ್ಯಕ್ರಮದಲ್ಲಿ ಭಾಗವಹಿಸುವ ನಿರೀಕ್ಷೆಯಿದೆ ಎಂದು ಸಚಿವಾಲಯ ತಿಳಿಸಿದೆ. ಭಾರತದ ಅಭಿವೃದ್ಧಿ ಪ್ರಯಾಣದೊಂದಿಗೆ ಯುವ ನಾಗರಿಕರನ್ನು ಸಂಪರ್ಕಿಸಲು ಮತ್ತು ಜವಾಬ್ದಾರಿಯುತ ರಾಷ್ಟ್ರ ನಿರ್ಮಾಣಕಾರರಾಗಿ ಅವರ ಪಾತ್ರವನ್ನು ಪ್ರೋತ್ಸಾಹಿಸಲು ಸಂವಾದಗಳು ಮತ್ತು ಚಟುವಟಿಕೆಗಳನ್ನು ಆಯೋಜಿಸಲಾಗುವುದು. ಈ ಉಪಕ್ರಮವು ಈಗಾಗಲೇ ೨೨ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಾದ್ಯಂತ ೨೭೪ ವಿಶ್ವವಿದ್ಯಾಲಯಗಳು ಮತ್ತು ಕಾಲೇಜುಗಳನ್ನು ತಲುಪಿದ್ದು, ಇದುವರೆಗೆ ಸುಮಾರು ೨೦ ಸಾವಿರ

ಯುವಕರನ್ನು ಸಜ್ಜುಗೊಳಿಸಿದೆ. ಕಾರ್ಯಕ್ರಮದಲ್ಲಿ ಭಾಗವಹಿಸಲು ಯುವಕರು mybharat.gov.in ಮೂಲಕ ನೋಂದಣಿಯಾಗಬಹುದು ಎಂದು ಸಚಿವಾಲಯ ಮಾಹಿತಿ ನೀಡಿದೆ.

<><><>

ಅಮೆರಿಕ ಮತ್ತು ಇಸ್ರೇಲ್ ಜಂಟಿಯಾಗಿ ನಡೆಸುತ್ತಿರುವ 'ಆಪರೇಷನ್ ಎಪಿಕ್ ಫ್ಯೂರಿ' ದಾಳಿಯ ನಡುವೆಯೇ, ಇರಾನ್ ತನ್ನ ನೂತನ ಸರ್ವೋಚ್ಚ ನಾಯಕನ ಹೆಸರನ್ನು ಘೋಷಿಸಿದೆ. ಇತ್ತೀಚೆಗೆ ನಡೆದ ದಾಳಿಯಲ್ಲಿ ಅಯತೊಲ್ಲಾ ಅಲಿ ಖಮೇನಿ ಅವರು ಮೃತಪಟ್ಟ ಹಿನ್ನೆಲೆಯಲ್ಲಿ, ಅವರ ಪುತ್ರ ಮೊಜ್ತಬಾ ಖಮೇನಿ ಅವರು ನೂತನ ಸರ್ವೋಚ್ಚ ನಾಯಕರಾಗಿ ನೇಮಕಗೊಂಡಿದ್ದಾರೆ ಎಂದು ಇರಾನ್ ಮಾಧ್ಯಮಗಳು ವರದಿ ಮಾಡಿವೆ. ಮತ್ತೊಂದೆಡೆ, ಪಶ್ಚಿಮ ಏಷ್ಯಾದಲ್ಲಿ ಉದ್ವಿಗ್ನತೆ ಮುಂದುವರಿದಿದ್ದು, ಯುಎಇಯ ಅಬುಧಾಬಿಯ ಮೇಲೆ ಇರಾನ್ ಕ್ಷಿಪಣಿ ದಾಳಿಗಳನ್ನು ನಡೆಸುತ್ತಿದೆ. ಈ ಹಿನ್ನೆಲೆಯಲ್ಲಿ ವಿಮಾನಯಾನ ಸಂಸ್ಥೆಗಳು ತಮ್ಮ ಕಾರ್ಯಾಚರಣೆಯನ್ನು ಬದಲಿಸಿಕೊಂಡಿದ್ದು, ಪ್ರಯಾಣಿಕರಿಗೆ ನೆರವಾಗಲು ವಿಮಾನಯಾನ ಸಚಿವಾಲಯವು ಸಹಾಯವಾಣಿ ಸಂಖ್ಯೆಗಳಾದ ೦೧೧-೨೪೬೦೪೨೮೩ ಹಾಗೂ ೦೧೧-೨೪೬೩೨೯೮೭ನ್ನು ಬಿಡುಗಡೆ ಮಾಡಿದೆ. ಈ ನಡುವೆ ಇರಾನ್ ಜೊತೆಗಿನ ಸಂಘರ್ಷದಲ್ಲಿ ಅಮೆರಿಕದ ೭ನೇ ಸೇನಾ ಸಿಬ್ಬಂದಿ ಸಾವನ್ನಪ್ಪಿದ್ದಾರೆ ಎಂದು ಅಮೆರಿಕ ರಕ್ಷಣಾ ಇಲಾಖೆ ತಿಳಿಸಿದೆ. ಮತ್ತೊಂದೆಡೆ ಇಸ್ರೇಲ್ ರಕ್ಷಣಾ ಪಡೆಗಳು ಇರಾನ್‌ನ ಐಆರ್‌ಜಿಸಿ ಪಡೆಯ ಪ್ರಧಾನ ಕಚೇರಿಯ ಮೇಲೆ ದಾಳಿ ನಡೆಸಿವೆ. ಇರಾನ್‌ನ ವಾಯು ಕಾರ್ಯಾಚರಣೆಗಳನ್ನು ನಿಯಂತ್ರಿಸುವ ಮತ್ತು ನಿರ್ದೇಶಿಸುವ ಪ್ರಮುಖ ನಿಯಂತ್ರಣಾ ಕೇಂದ್ರ ಇದಾಗಿದೆ ಎಂದು ಇಸ್ರೇಲ್ ತಿಳಿಸಿದೆ. ಸೌದಿ-ಅರೆಬಿಯಾದ ದಕ್ಷಿಣ ಭಾಗದಲ್ಲಿರುವ ಶೈಬಾಹ್ ತೈಲ ನಿಕ್ಷೇಪವನ್ನು ಗುರಿಯಾಗಿಸಿಕೊಂಡು ಬಂದ ಡ್ರೋನ್ ಅನ್ನು ಹೊಡೆದುರುಳಿಸಿರುವುದಾಗಿ ಸೌದಿ-ಅರೆಬಿಯಾ ರಕ್ಷಣಾ ಸಚಿವಾಲಯ ತಿಳಿಸಿದೆ. ಇತ್ತ ಬಹ್ರೇನ್‌ನಲ್ಲಿ ಇಂದು ಮುಂಜಾನೆ ೨ನೇ ಬಾರಿಗೆ ಎಚ್ಚರಿಕೆ ಸೈರನ್‌ಗಳು ಮೊಳಗಿದ್ದು, ಸುರಕ್ಷಿತ ಸ್ಥಳಗಳಿಗೆ ತೆರಳುವಂತೆ ಅಲ್ಲಿನ ಆಂತರಿಕ ಸಚಿವಾಲಯ ನಿವಾಸಿಗಳಿಗೆ ಸೂಚನೆ ನೀಡಿದೆ. ಸಂಘರ್ಷದ ತೀವ್ರತೆಯನ್ನು ಪರಿಗಣಿಸಿ ಆಸ್ಟ್ರೇಲಿಯಾ ಸರ್ಕಾರ ಯುನೈಟೆಡ್ ಅರಬ್ ಎಮಿರೇಟ್ಸ್-ಯುಎಇ ಯಲ್ಲಿರುವ ತನ್ನ ರಾಜತಾಂತ್ರಿಕ ಸಿಬ್ಬಂದಿಯ ಕುಟುಂಬ ಸದಸ್ಯರು ಹಾಗೂ ಅವಲಂಬಿತರಿಗೆ ತಕ್ಷಣವೇ ದೇಶ ತೊರೆಯುವಂತೆ ಸೂಚಿಸಿದೆ.

<><><>

ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ಕಳೆದ ರಾತ್ರಿ ನಡೆದ ಟಿ-೨೦ ವಿಶ್ವಕಪ್ ಫೈನಲ್ ಪಂದ್ಯದಲ್ಲಿ ನ್ಯೂಜಿಲೆಂಡ್ ತಂಡವನ್ನು ೯೬ ರನ್‌ಗಳಿಂದ ಸೋಲಿಸುವ ಮೂಲಕ ಭಾರತ ತಂಡ ಸತತ ಎರಡನೇ ಬಾರಿ ಹಾಗೂ ಒಟ್ಟಾರೆ ಮೂರು ಬಾರಿ ವಿಶ್ವಕಪ್ ಮುಡಿಗೇರಿಸಿಕೊಂಡು ಇತಿಹಾಸ ಸೃಷ್ಟಿಸಿದೆ. ಸೂರ್ಯಕುಮಾರ್ ಯಾದವ್ ನೇತೃತ್ವದ ಭಾರತ ತಂಡ ನೀಡಿದ್ದ ೨೫೬ ರನ್‌ಗಳ ಬೃಹತ್ ಗುರಿಯನ್ನು ಬೆನ್ನಟ್ಟಿದ ನ್ಯೂಜಿಲೆಂಡ್, ೧೯ ಓವರ್‌ಗಳಲ್ಲಿ ತನ್ನೆಲ್ಲ ವಿಕೆಟ್ ಕಳೆದುಕೊಂಡು ಕೇವಲ ೧೫೯ ರನ್ ಗಳಿಸಲಷ್ಟೇ ಶಕ್ತವಾಯಿತು. ಇದಕ್ಕೂ ಮುನ್ನ ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಭಾರತ ನಿಗದಿತ ೨೦ ಓವರ್‌ಗಳಲ್ಲಿ ೫ ವಿಕೆಟ್ ನಷ್ಟಕ್ಕೆ ದಾಖಲೆಯ ೨೫೫ ರನ್‌ಗಳಿಸಿತು. ಭಾರತದ ಪರ ಸಂಜು ಸ್ಯಾಮ್ಸನ್ ೮೯, ಅಭಿಷೇಕ್ ಶರ್ಮ ೫೨, ಇಶಾನ್ ಕಿಶನ್ ೫೪ ರನ್‌ಗಳಿಸಿ ತಂಡದ ಬೃಹತ್ ಮೊತ್ತದಲ್ಲಿ ಪ್ರಮುಖ ಪಾತ್ರ ವಹಿಸಿದರು. ಬಳಿಕ ಕೆಲವೇ ಎಸೆತಗಳ ಅಂತರದಲ್ಲಿ ೪ ವಿಕೆಟ್‌ಗಳನ್ನು ಕಳೆದುಕೊಂಡು ಉತ್ತಮ ಆರಂಭದ ನಡುವೆಯೂ ಸಾಮಾನ್ಯ ಮೊತ್ತದತ್ತ ಸಾಗಿದ್ದ ಭಾರತ ತಂಡಕ್ಕೆ ಇನ್ನಿಂಗ್ಸ್ ಕೊನೆಯಲ್ಲಿ ಶಿವಂದುಬೆ ಕೇವಲ ೮ ಎಸೆತಗಳಲ್ಲಿ ಸಿಡಿಸಿದ ೨೬ ರನ್ ನ್ಯೂಜಿಲೆಂಡ್‌ಗೆ ಬೃಹತ್ ಮೊತ್ತ ನೀಡಲು ಸಹಕಾರಿಯಾಯಿತು. ೪ ವಿಕೆಟ್ ಪಡೆದ ಜಸ್ಪ್ರೀತ್ ಬುಮ್ರಾ 'ಪಂದ್ಯ ಶ್ರೇಷ್ಠ' ಪ್ರಶಸ್ತಿಗೆ ಭಾಜನರಾದರೆ, ಇಡೀ ಸರಣಿಯಲ್ಲಿ ಅದ್ಭುತ ಪ್ರದರ್ಶನ ನೀಡಿದ ಸಂಜು ಸ್ಯಾಮ್ಸನ್ 'ಸರಣಿ ಶ್ರೇಷ್ಠ' ಗೌರವಕ್ಕೆ ಪಾತ್ರರಾದರು.

<><><><>

ಐಸಿಸಿ ಪುರುಷರ ಟಿ-೨೦ ವಿಶ್ವಕಪ್‌ನಲ್ಲಿ ಅಮೋಘ ಜಯ ಸಾಧಿಸಿದ ಭಾರತೀಯ ಕ್ರಿಕೆಟ್ ತಂಡಕ್ಕೆ ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಹಾಗೂ ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರು ಅಭಿನಂದನೆಗಳನ್ನು ಸಲ್ಲಿಸಿದ್ದಾರೆ. ಭಾರತ ತಂಡದ ಐತಿಹಾಸಿಕ ಸಾಧನೆಯನ್ನು ಶ್ಲಾಘಿಸಿರುವ ರಾಷ್ಟ್ರಪತಿ ದ್ರೌಪದಿ ಮುರ್ಮು, 'ಮೂರು ಬಾರಿ ವಿಶ್ವಕಪ್ ಗೆದ್ದ ಏಕೈಕ ರಾಷ್ಟ್ರ ಹಾಗೂ ಸತತ ಎರಡು ಬಾರಿ ಚಾಂಪಿಯನ್ ಪಟ್ಟ ಅಲಂಕರಿಸಿದ ಹೆಗ್ಗಳಿಕೆಗೆ ಭಾರತ ಪಾತ್ರವಾಗಿದೆ. ಇದು ದೇಶದ ಕೋಟ್ಯಂತರ ಕ್ರಿಕೆಟ್ ಪ್ರೇಮಿಗಳಿಗೆ ಅಪಾರ ಸಂತೋಷ ಮತ್ತು ಹೆಮ್ಮೆಯನ್ನು ತಂದಿದೆ,' ಎಂದು ತಿಳಿಸಿದ್ದಾರೆ. ಭಾರತದ ಯುವಜನತೆಯಲ್ಲಿರುವ ಅದ್ಭುತ ಪ್ರತಿಭೆಗೆ ಈ ಗೆಲುವು ಸಾಕ್ಷಿಯಾಗಿದೆ ಎಂದು ಬಣ್ಣಿಸಿದ ಅವರು, ಪ್ರತಿಯೊಬ್ಬ ಆಟಗಾರ, ಆಡಳಿತ

ಮಂಡಳಿ ಮತ್ತು ಪೋಷಕ ಸಿಬ್ಬಂದಿಯ ಸಾಮೂಹಿಕ ಪ್ರಯತ್ನಕ್ಕೆ ಶ್ಲಾಘನೆ ವ್ಯಕ್ತಪಡಿಸಿದ್ದಾರೆ. ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ತಮ್ಮ ಸಂದೇಶದಲ್ಲಿ "ಫೈನಲ್ ಪಂದ್ಯದಲ್ಲಿ ಭಾರತವು ಐತಿಹಾಸಿಕ ಪ್ರದರ್ಶನ ನೀಡಿದೆ. ಮೂರು ಬಾರಿ ಟಿ-೨೦ ವಿಶ್ವಕಪ್ ಗೆದ್ದ ಮೊದಲ ತಂಡ ಎಂಬ ಕೀರ್ತಿಗೆ ಭಾಜನವಾಗಿರುವುದು ಇಡೀ ದೇಶಕ್ಕೆ ಹೆಮ್ಮೆಯ ಕ್ಷಣವಾಗಿದೆ,' ಎಂದಿದ್ದಾರೆ. ತಂಡದ ಈ ಯಶಸ್ಸಿಗೆ ಬೆನ್ನೆಲುಬಾಗಿ ನಿಂತ ಸಿಬ್ಬಂದಿ ವರ್ಗ ಮತ್ತು ಕೋಟ್ಯಂತರ ಅಭಿಮಾನಿಗಳಿಗೆ ಅವರು ಶುಭ ಹಾರೈಸಿದ್ದಾರೆ. ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರು, ಸಾಮಾಜಿಕ ಜಾಲತಾಣದ ಮೂಲಕ ತಂಡವನ್ನು ಅಭಿನಂದಿಸಿದ್ದು, 'ಈ ಗಮನಾರ್ಹ ವಿಜಯವು ತಂಡದ ಅಸಾಧಾರಣ ಕೌಶಲ, ದೃಢಸಂಕಲ್ಪ ಮತ್ತು ಸಮನ್ವಯದ ಪ್ರತಿಫಲವಾಗಿದೆ. ಇಡೀ ಟೂರ್ನಿಯುದ್ದಕ್ಕೂ ನಮ್ಮ ಆಟಗಾರರು ತೋರಿದ ಅದ್ಭುತ ಧೈರ್ಯ ಮತ್ತು ಜಾಣ್ಮೆ ಶ್ಲಾಘನೀಯ,' ಎಂದು ತಿಳಿಸಿದ್ದಾರೆ. ಕೇಂದ್ರ ಗೃಹ ಸಚಿವ ಅಮಿತ್ ಶಾ, ಕೂಡ ತಂಡದ ಸಾಧನೆಯನ್ನು ಕೊಂಡಾಡಿದ್ದು, ಟೂರ್ನಿಯುದ್ದಕ್ಕೂ ಭಾರತ ತೋರಿದ ಅಪ್ರತಿಮ ಪ್ರದರ್ಶನವು ದೇಶಕ್ಕೆ ಕೀರ್ತಿ ಮತ್ತು ಹೆಮ್ಮೆಯನ್ನು ತಂದಿದೆ ಎಂದು ಹೇಳಿದ್ದಾರೆ. ಈ ಐತಿಹಾಸಿಕ ವಿಜಯವು ಭಾರತೀಯ ಕ್ರೀಡಾ ಕ್ಷೇತ್ರದಲ್ಲಿ ಹೊಸ ಮೈಲಿಗಲ್ಲನ್ನು ಸ್ಥಾಪಿಸಿದ್ದು, ದೇಶಾದ್ಯಂತ ಸಂಭ್ರಮದ ವಾತಾವರಣ ನೆಲೆಸಿದೆ.

<><><><>

ಹೈದರಾಬಾದ್‌ನಲ್ಲಿ ನಡೆಯುತ್ತಿರುವ ೨೦೨೬ರ ಎಫ್‌ಐಹೆಚ್ ಮಹಿಳಾ ಹಾಕಿ ವಿಶ್ವಕಪ್ ಅರ್ಹತಾ ಸುತ್ತಿನ ಪಂದ್ಯಾವಳಿಯಲ್ಲಿ, ಭಾರತದ ಮಹಿಳಾ ತಂಡ ಇಂದು ತನ್ನ ಎರಡನೇ 'ಪೂಲ್ ಬಿ' ಪಂದ್ಯದಲ್ಲಿ ಸ್ಕಾಟ್ಲೆಂಡ್ ತಂಡವನ್ನು ಎದುರಿಸಲಿದೆ. ಈ ಪಂದ್ಯ ಇಂದು ರಾತ್ರಿ ೭:೩೦ಕ್ಕೆ ಆರಂಭವಾಗಲಿದೆ. ಭಾರತದ ಮಹಿಳಾ ತಂಡ ನಿನ್ನೆ ನಡೆದ ತನ್ನ ಮೊದಲ ಪಂದ್ಯದಲ್ಲಿ ಉರುಗ್ವೆ ವಿರುದ್ಧ ೪-೦ ಗೋಲುಗಳ ಅಂತರದ ಭರ್ಜರಿ ಜಯ ದಾಖಲಿಸುವ ಮೂಲಕ ಅರ್ಹತಾ ಸುತ್ತಿನ ಅಭಿಯಾನವನ್ನು ಶುಭಾರಂಭಗೊಳಿಸಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>